**ಸರ್ಕಾರಿ ಉರ್ದು ಪ್ರೌಢಶಾಲೆ (ಆರ್.ಎಂ.ಎಸ್.ಎ) ಅರಳಿಹಳ್ಳಿ, ಭದ್ರಾವತಿ ತಾಲ್ಲೂಕು ಶಿವಮೊಗ್ಗ ಜಿಲ್ಲೆ**

**ಸಮಯ : 2.45 ಗಂಟೆ** **ಅರ್ಧವಾರ್ಷಿಕ ಪರೀಕ್ಷೆ** **ಅಂಕಗಳು: 80**

**ತರಗತಿ: 10** **ವಿಷಯ: ದ್ವಿತೀಯ ಭಾಷೆ ಕನ್ನಡ** **ವಿಷಯ ಸಂಕೇತ : 33K**

---

**I. ಈ ಕೆಳಗಿನ ಪ್ರಶ್ನೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಇವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ ಕ್ರಮಾಕ್ಷರದೊಂದಿಗೆ ಬರೆಯಿರಿ.** **4 x 1=4**

1) ಕನ್ನಡ ವರ್ಣಮಾಲೆಯಲ್ಲಿರುವ ಅನುನಾಸಿಕ ಅಕ್ಷರಗಳ ಸಂಖ್ಯೆ ______
ಎ) 2 ಬಿ) 5 ಸಿ) 3 ಡಿ) 4

2) 'ಒಂದೊಂದು' ಇದು ________ ವ್ಯಾಕರಣಾಂಶಕ್ಕೆ ಉದಾಹರಣೆ.
ಎ) ಅನುಕರಣಾವ್ಯಯ ಬಿ) ಜೋಡುನುಡಿ ಸಿ) ನುಡಿಗಟ್ಟು ಡಿ) ದ್ವಿರುಕ್ತಿ

3) 'ಹಿಂಡುಗಟ್ಟಿ' ಇದು ____________ ಸಮಾಸಕ್ಕೆ ಉದಾಹರಣೆ.
ಎ) ತತ್ಪುರುಷ ಬಿ) ಕ್ರಿಯಾ ಸಿ) ಕರ್ಮಧಾರಯ ಡಿ) ದ್ವಿಗು

4) 'ಪ್ರಗತಿಯಲ್ಲಿ' ಇಲ್ಲಿರುವ ವಿಭಕ್ತಿ ಪ್ರತ್ಯಯ ____________
ಎ) ದ್ವಿತೀಯ ಬಿ) ಸಪ್ತಮಿ ಸಿ) ತೃತೀಯ ಡಿ) ಷಷ್ಠೀ

**II. ಕೆಳಗಿನ ಪ್ರತಿಯೊಂದು ಪ್ರಶ್ನೆಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **12**

5. ಬೇಡನು ಪ್ರಾಣಿಗಳನ್ನು ಕೊಲ್ಲಲು ಮಾಡುತ್ತಿದ್ದ ಉಪಾಯವೇನು?
6. ಗಿಳಿಯ ಯಾವ ಗುಣವನ್ನು ಇಂದ್ರನು ಮೆಚ್ಚಿಕೊಂಡನು?
7. ಅಸಿ–ಮಸಿ ಎಂದರೇನು?
8. ಪುಟ್ಟರಾಜರು ಖಾದಿ ಬಟ್ಟೆ ತೊಡಲು ನಿರ್ಧರಿಸಿದ್ದು ಏಕೆ?
9. ಪುಟ್ಟರಾಜರು ಯಾವ ಯಾವ ಭಾಷೆಗಳಲ್ಲಿ ಪಾಂಡಿತ್ಯ ಗಳಿಸಿದ್ದರು?
10. ಹಕ್ಕಿಗೂಡಿನಲ್ಲಿ ಯಾವುದರ ಸಮನ್ವಯತೆ ಇದೆ?
11. ನಾವೀಗ ಎಲ್ಲೆಲ್ಲಿ ತೂಗಾಡುವ ಹಕ್ಕಿಯ ಗೂಡುಗಳನ್ನು ಕಾಣುತ್ತಿದ್ದೇವೆ?
12. ಬುದ್ಧನು ಅರಿತುಕೊಂಡ ಬದುಕಿನ ಸತ್ಯವೇನು?
13. ಯುಗಾದಿಯಲ್ಲಿ ಯಾವ ತಿನಿಸನ್ನು ಹಂಚುವ ಸಂಪ್ರದಾಯವಿದೆ?
14. ನಮ್ಮ ಕರ್ತವ್ಯಗಳನ್ನು ಹೇಗೆ ಮುಗಿಸಬೇಕೆಂದು ಕವಿ ಹೇಳಿದ್ದಾರೆ?
15. ಜೀವನದಲ್ಲಿ ಗಾಳಿ ಬಂದೆಡೆ ತಿರುಗುವುದು ಏನು?
16. ಅಡಿಗರ ಪ್ರಕಾರ ಪೌರುಷದ ಬಾಳ್ವೆ ಯಾವುದು?

**III. ಈ ಕೆಳಗಿನ ಪ್ರಶ್ನೆಗಳಿಗೆ ಮೂರು–ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **8 x 2=16**

17. ಮರವನ್ನು ಬಿಟ್ಟು ಹೋಗದೆ ಇರಲು ಗಿಳಿಯು ನೀಡಿದ ಸಮರ್ಥನೆ ಏನು?
18. ಸರ್ವಜ್ಞ ಕವಿಯು ಕೃಷಿಯ ಬಗ್ಗೆ ಹೇಳಿರುವ ವಚನ ಯಾವುದು?
19. ಹಕ್ಕಿಗಳು ಗೂಡುಗಳನ್ನು ಯಾವ ರೀತಿಯಲ್ಲಿ ಅಲಂಕರಿಸುತ್ತವೆ?
20. ಸಿದ್ಧಾರ್ಥನಿಗೆ ನಾಡಿನ ಅರ್ಥ ತಿಳಿದ ಸಂದರ್ಭವನ್ನು ಕವಿ ಏನೆಂದು ಬಣ್ಣಿಸಿದ್ದಾರೆ?
21. ಚೈತ್ರದಲ್ಲಿ ಪ್ರಾಣಿ ಪಕ್ಷಿಗಳ ಚಟುವಟಿಕೆಗಳು ಕವಿಗೆ ಹೇಗೆ ಗೋಚರಿಸಿದವು?
22. ಮಾನವನ ಬದುಕು ಕರ್ಪೂರದಂತೆ ಇರಬೇಕು ಏಕೆ?
23. ವೈದ್ಯರು ಭೀಮನಾಯಕನ ಮಗುವಿನ ಪ್ರಾಣವನ್ನು ಹೇಗೆ ಉಳಿಸಿದರು?
24. ಕಳ್ಳರ ಗುರುವಿನ ಮನಃ ಪರಿವರ್ತನೆ ಹೇಗಾಯಿತು?

**IV. ಕೆಳಗಿನ ಕವಿ/ಸಾಹಿತಿಯ ಜನ್ಮಸ್ಥಳ, ಕಾಲ, ಕೃತಿ ಮತ್ತು ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ.** **1 x 3=3**

25. ಅ.ರಾ. ಮಿತ್ರ

**V. ಕೆಳಗಿನ ಪದ್ಯದ ಸಾರಾಂಶವನ್ನು ವಾಕ್ಯರೂಪದಲ್ಲಿ ಬರೆಯಿರಿ.** **1 x 3=3**

26. ಕೆಸರೊಳಿದ್ದರು ಮೇಲೆ ಬಾಂದಳವ ನೋಡಿ
ಮಿಸುವ ರವಿಕಿರಣಗಳ ಸಿರಿಗೆ ಮೆರೆದಾಡಿ
ಮಸಗುವಂಬುಜದಂತೆ ಧ್ಯೇಯದಾಳ್ವೆಸಕೆ
ಬಸಮಾಗು, ಬಂದ ಮನುಜತೆಯ ಸಾರ್ಥಕತೆಗೆ.

**VI. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಸಮನ್ವಯಗೊಳಿಸಿ ಬರೆಯಿರಿ.** **1 x 3=3**

27) ಬಾಳೆಯ ಹಣ್ಣಿನಂತೆ ಬಾಗಿದ ಕುಣಿಗಲ್ ಕೆರೆ.

**VII. ಈ ಕೆಳಗಿನ ಗಾದೆಗಳಲ್ಲಿ ಒಂದನ್ನು ವಿಸ್ತರಿಸಿ ಬರೆಯಿರಿ** 1 x 3=3

28) ಹಾಸಿಗೆ ಇದ್ದಷ್ಟು ಕಾಲು ಚಾಚು "ಅಥವಾ" ಕೈ ಕೆಸರಾದರೆ ಬಾಯಿ ಮೊಸರು

**VIII. ಕೆಳಗಿನವುಗಳಿಗೆ ಸಂದರ್ಭ ಸಹಿತ ಸ್ವಾರಸ್ಯವನ್ನು ಬರೆಯಿರಿ.** 5 x 3=15

29. "ಅವರು ಯಾರಿಗೂ ಮೋಸ, ವಂಚನೆ ಮಾಡುವವರಲ್ಲ."
30. "ಗೂಡನ್ನು ಅಂದಗೊಳಿಸುವ ಸೌಂದರ್ಯ ಪ್ರಜ್ಞೆಯು ಅವಕ್ಕಿದೆ."
31. "ಪ್ರೀತಿಯನ್ನು ಹುಡುಕಿಕೊಂಡು ಜನರ ಕಡೆಗೆ ಬಂದನು."
32. "ಕೂಗಾಡಿ, ಹಾರಾಡಿ ಫಲವದೇನು?"
33. "ಪರಹಿತಕೆ ಬಳಲುತಿರಲದುವೆ ಜೀವನವು."

**IX. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ.** 1 x 4 =4

34. ಕೊರಡ ........................................ **ಅಥವಾ** ಯುಗದ ಹಿಂದಿನ ..............................

.................................................... ....................................................

.................................................... ....................................................

.............................. ಕಲರವಕೆ ಮತ್ತೇರಿದೆ. .............................. ತುಂಬ ಸವಿಚೈತ್ರವು.

**X. ಈ ಕೆಳಗಿನ ಪ್ರಶ್ನೆಗಳಿಗೆ 8 ಅಥವಾ 10 ವಾಕ್ಯಗಳಲ್ಲಿ ಉತ್ತರಿಸಿ.** 1 x 4=4

35) ಬಾಲಕ ಪುಟ್ಟಯ್ಯ ಹಾರ್ಮೋನಿಯಂ ನುಡಿಸಿದ ಪ್ರಸಂಗ ವಿವರಿಸಿ. **ಅಥವಾ**
ಪುಟ್ಟಯ್ಯ ಸಮಾಜಕ್ಕೆ ಮುಡುಪಾದ ಪ್ರಸಂಗವನ್ನು ಕುರಿತು ಬರೆಯಿರಿ.

**XI. ಈ ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.** 2 x 2=4

36) ಮನಸ್ಸು ರೋಗವನ್ನು ಸೃಷ್ಟಿಸಬಲ್ಲದು, ಗುಣಪಡಿಸಲೂ ಬಲ್ಲದು! ತಾಳ್ಮೆ, ಪ್ರೀತಿ, ಕರುಣೆ, ದಾನಬುದ್ಧಿ, ನಿಸ್ವಾರ್ಥ ಸೇವಾ ಮನೋಭಾವ – ಇವೇ ಮೊದಲಾದ ರಚನಾತ್ಮಕ ಭಾವನೆಗಳು ದೇಹ–ಯಂತ್ರದ ಆರೋಗ್ಯಕರ ಚಟುವಟಿಕೆಗಳಿಗೆ ಕಾರಣವಾಗುತ್ತವೆ. ನಮ್ಮಲ್ಲಿ ಸಂತೋಷ, ತೃಪ್ತಿ ಹಾಗೂ ಸೃಜನಶೀಲ ಪ್ರವೃತ್ತಿಗಳನ್ನು ಎಚ್ಚರಗೊಳಿಸುತ್ತವೆ. ಹಾಗೆಯೇ ನಿಷೇಧಮಯ ಭಾವನೆಗಳಿಂದ ಭಯ, ಚಿಂತೆ, ದ್ವೇಷ, ಅಸೂಯೆ, ಸೋಲಿನ ಮನೋಭಾವ ಹಾಗೂ ಸಂಕುಚಿತ ಸ್ವಾರ್ಥದ ನಾನಾ ಅವತಾರಗಳು ಸಮಸ್ತ ದೇಹ ಮತ್ತು ಅಂಗಾಂಗಗಳಿಗೆ ಕೆಡುಕನ್ನುಂಟು ಮಾಡಿ ರೋಗಕ್ಕೆ ಕಾರಣವಾಗುತ್ತವೆ. ಪ್ರಸನ್ನತೆ, ಶಾಂತತೆ, ಧೈರ್ಯ, ಆತ್ಮವಿಶ್ವಾಸ, ದೃಢ ನಿಶ್ಚಯ ಇವೇ ಮೊದಲಾದ ಭಾವನೆಗಳು ಶರೀರದ ಸುಸ್ಥಿತಿಗೆ ಆರೋಗ್ಯ ವರ್ಧಕ ಟಾನಿಕ್‌ಗಿಂತಲೂ ಹೆಚ್ಚಿನ ಸಹಾಯ ಮಾಡುತ್ತವೆ. ಮನಸ್ಸಿನಲ್ಲಿ ಉದಿಸುವ ಯೋಚನೆ ಎಂಬ ದ್ರವ್ಯದಿಂದ ವಿಷವನ್ನು ತಯಾರಿಸಬಹುದು. ಅಮೃತವನ್ನೂ ತಯಾರಿಸಬಹುದು. ಮನಸ್ಸು ಕೆಲಸ ಮಾಡುವ ಸೂಕ್ಷ್ಮ ನಿಯಮವನ್ನು ತಿಳಿದುಕೊಂಡರೆ ಶ್ರದ್ಧೆಯಿಂದ ಶ್ರಮಿಸಿದರೆ ವಿಷವನ್ನೂ ಅಮೃತವನ್ನಾಗಿಸಬಹುದು. ಜಾಡ್ಯ ಮನೋಭಾವ, ಅನೈಕಾಗ್ರತೆ, ಅವ್ಯವಸ್ಥೆ, ಸಿಡುಕು, ಬಲವಾದ ಪೂರ್ವಾಗ್ರಹಗಳು ಮನಸ್ಸೆಂಬ ಯಂತ್ರವನ್ನು ಹಾಳುಮಾಡಿಬಿಡುತ್ತವೆ. ಕ್ರಮನಿಯಮ, ವ್ಯವಸ್ಥೆ, ತಾಳ್ಮೆ, ಸಮತೋಲನ, ಸದುದ್ದೇಶ, ವ್ಯಾವಹಾರಿಕತೆ ಇವುಗಳ ಸಹಕಾರದಿಂದ ಯೋಜನೆಗಳನ್ನು ರೂಪಿಸಿಕೊಂಡರೆ ನಮ್ಮನ್ನು ದುರ್ಬಲಗೊಳಿಸುವ, ದುರಂತಕ್ಕೀಡುಮಾಡುವ ನಿಷೇಧಾತ್ಮಕ ಭಾವನೆಗಳು ಸಮೀಪ ಸುಳಿಯಲಾರವು.

**ಪ್ರಶ್ನೆಗಳು:**

36.ಅ) ರೋಗಕ್ಕೆ ಕಾರಣವಾಗುವ ಅಂಶಗಳಾವುವು?
36.ಆ) ಯಾವುವು ಮನಸ್ಸೆಂಬ ಯಂತ್ರವನ್ನು ಹಾಳುಮಾಡುತ್ತವೆ?

**XII. ಈ ಕೆಳಗಿನ ಯಾವುದಾದರೂ ಒಂದು ವಿಷಯವನ್ನು ಕುರಿತು ಪ್ರಬಂಧವನ್ನು ಬರೆಯಿರಿ.** 1 x 4=4

37) ಪರಿಸರ ಸಂರಕ್ಷಣೆಯ ಇಂದಿನ ಅಗತ್ಯ **"ಅಥವಾ"** ಬಾಲ್ಯ ವಿವಾಹ ಒಂದು ಸಾಮಾಜಿಕ ಪಿಡುಗು

**XIII. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ.** 1 x 5=5

38) ನಿಮ್ಮ ಊರಿಗೆ ಉತ್ತಮ ಕುಡಿಯುವ ನೀರನ್ನು ಪೂರೈಸುವಂತೆ ಕೋರಿ, ನಿಮ್ಮ ಗ್ರಾಮದ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಒಂದು ಪತ್ರ ಬರೆಯಿರಿ. "ಅಥವಾ"

ನಿಮ್ಮನ್ನು ರವೀಂದ್ರ ಅಥವಾ ರಾಧ ಸರ್ಕಾರಿ ಪ್ರೌಢಶಾಲೆ ಧಾರವಾಡ ಎಂದು ಭಾವಿಸಿಕೊಂಡು ಮೈಸೂರಿನಲ್ಲಿರುವ ನಿಮ್ಮ ತಂದೆ ಶಿವಪ್ಪನವರಿಗೆ ಶಾಲಾ ಶೈಕ್ಷಣಿಕ ಪ್ರವಾಸ ಹೋಗಲು 1200 ರೂಪಾಯಿಗಳನ್ನು ಕಳುಹಿಸಿಕೊಡುವಂತೆ ಕೋರಿ ಒಂದು ಪತ್ರ ಬರೆಯಿರಿ.

********************